**All India Radio: Bangalore**
**Regional Bulletin In Kannada**
**12.03.2025 / 2.30 p.m.**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

೧. ಖಾತರಿ ಯೋಜನೆಗಳ ಅನುಷ್ಠಾನ ಸಮಿತಿ ರಚನೆ ಸ್ವರೂಪಕ್ಕೆ ವಿರೋಧ; ವಿಧಾನಸಭೆಯಲ್ಲಿ ಪ್ರತಿಪಕ್ಷಗಳಿಂದ ಸಭಾತ್ಯಾಗ

೨. ಐದು ವರ್ಷಗಳಲ್ಲಿ ಸಾರಿಗೆ ಸಂಸ್ಥೆಗಳಿಗೆ ೫ ಸಾವಿರದ ೨೦೦ ಕೋಟಿ ರೂಪಾಯಿ ಖೋತಾ -ಮೇಲ್ಮನೆಯಲ್ಲಿ ಸಚಿವ ರಾಮಲಿಂಗಾರೆಡ್ಡಿ ಸ್ಪಷ್ಟನೆ

೩. ದಕ್ಷಿಣ ರಾಜ್ಯಗಳ ಪ್ರತಿನಿಧಿಗಳ ಸಭೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಆಹ್ವಾನ ನೀಡಿದ ತಮಿಳುನಾಡು ನಿಯೋಗ

೪. ಸಂಬಾರ ಮಂಡಳಿಯ ದರ ಪಟ್ಟಿಯಲ್ಲಿ ಶಿರಸಿಯ ಕಾಳುಮೆಣಸು ನಮೂದಿಸುವಂತೆ ಕೇಂದ್ರ ಸರ್ಕಾರಕ್ಕೆ ಮನವಿ

****************

ಸರ್ಕಾರದ ಖಾತರಿ ಯೋಜನೆಗಳ ಅನುಷ್ಠಾನಕ್ಕೆ ರಚಿಸಲಾಗಿರುವ ಕಾಂಗ್ರೆಸ್ ಕಾರ್ಯಕರ್ತರ ಸಮಿತಿಗಳನ್ನು ರದ್ದು ಪಡಿಸಬೇಕೆಂದು ಒತ್ತಾಯಿಸಿ ಪ್ರತಿಪಕ್ಷ ಬಿಜೆಪಿ ಮತ್ತು ಜೆಡಿಎಸ್ ಸದಸ್ಯರು ವಿಧಾನಸಭೆಯಲ್ಲಿ ಇಂದೂ ಸಹ ಧರಣಿ ಮುಂದುವರೆಸಿದ್ದರಿಂದ ಸದನ ಕಲಾಪವನ್ನು ಮಧ್ಯಾಹ್ನದವರೆಗೆ ಮುಂದೂಡಲಾಗಿದೆ.

ಅನುಷ್ಠಾನ ಸಮಿತಿಗಳ ರದ್ದತಿಗೆ ಒತ್ತಾಯಿಸಿ ಪ್ರತಿಪಕ್ಷಗಳ ಸದಸ್ಯರು ನಿನ್ನೆ ಯಿಂದ ನಡೆಸುತ್ತಿದ್ದ ಧರಣಿಯನ್ನು ಇಂದು ಬೆಳಿಗ್ಗೆ ಸದನ ಸಮಾವೇಶಗೊಳ್ಳುತ್ತಿದ್ದಂತೆ ಮುಂದುವರೆಸಿದರು.

ಪಕ್ಷದ ಕಾರ್ಯಕರ್ತರ ಇಂತಹ ಸಮಿತಿಗಳನ್ನು ವಿಸರ್ಜನೆ ಮಾಡಿ, ಶಾಸಕರ ಅಧ್ಯಕ್ಷತೆಯಲ್ಲೇ ಸಮಿತಿಗಳನ್ನು ರಚಿಸಬೇಕೆಂದು ಪಟ್ಟು ಹಿಡಿದು ಸರ್ಕಾರದ ವಿರುದ್ಧ ಘೋಷಣೆ ಕೂಗಿದರು.

ಸಭಾಧ್ಯಕ್ಷ ಯು.ಟಿ.ಖಾದರ್,ಮಾತನಾಡಿ, ಪ್ರತಿಪಕ್ಷದ ಸದಸ್ಯರು ನಡೆಸುತ್ತಿರುವ ಧರಣಿ ಪರಿಣಾಮವಾಗಿ ಯಾವುದೇ ಕಾರ್ಯ ಕಲಾಪ ನಡೆಸಲು ಸಾಧ್ಯವಾಗುತ್ತಿಲ್ಲ. ಧರಣಿ ಕೈಬಿಟ್ಟು ಸುಗಮ ಕಲಾಪಕ್ಕೆ ಸಹಕರಿಸಬೇಕೆಂದು ಮನವಿ ಮಾಡಿದರು.

ಸಭಾಧ್ಯಕ್ಷರ ಮನವಿಗೆ ಪ್ರತಿಪಕ್ಷಗಳ ಸದಸ್ಯರು ಸ್ಪಂದಿಸದೇ ಇದ್ದಾಗ ಕಲಾಪವನ್ನು ಮುಂದೂಡಲಾಯಿತು.

****************

ಗ್ಯಾರಂಟಿ ಅನುಷ್ಠಾನ ಸಮಿತಿಗಾಗಿ ರಾಜ್ಯದ ತೆರಿಗೆದಾರರ ಹಣ ದುರುಪಯೋಗ ಮಾಡುತ್ತಿದೆ ಎಂದು ಆರೋಪಿಸಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಇಂದು ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳ ಶಾಸಕರುಗಳು ವಿಧಾನ ಸೌಧದ ಕೆಂಗಲ್ ಹನುಮಂತಯ್ಯ ಪ್ರತಿಮೆ ಬಳಿ ಪ್ರತಿಭಟನೆ ನಡೆಸಿದರು.

ಬಳಿಕ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಮೇಲ್ವಿಚಾರಣೆ ಸಮಿತಿಗಳನ್ನು ರದ್ದುಗೊಳಿಸಬೇಕೆಂದು ಬಿಜೆಪಿ ಹಾಗೂ ಜೆಡಿಎಸ್ ಶಾಸಕರು ಇಂದು ರಾಜಭವನಕ್ಕೆ ತೆರಳಿ ರಾಜ್ಯಪಾಲರಿಗೆ ದೂರು ನೀಡಿದ್ದಾರೆ.

ಕಾಲ್ನಡಿಗೆ ಮೂಲಕ ತೆರಳಿ ದೂರು ನೀಡಿದ ನಿಯೋಗ ಕೂಡಲೇ ಯೋಜನೆಗಳ ಅನುಷ್ಠಾನದ ಮೇಲ್ವಿಚಾರಣೆ ಸಮಿತಿ ರದ್ದುಗೊಳಿಸಬೇಕು ಎಂದು ಮನವಿ ಸಲ್ಲಿಸಿದ್ದಾರೆ. ಸಮಿತಿಗಳ ಸದಸ್ಯರಿಗೆ ವೇತನ ನೀಡಲು ತೆರಿಗೆದಾರರ ಹಣವನ್ನು ಪೋಲು ಮಾಡಲಾಗುತ್ತಿದೆ ಎಂದು ಆರೋಪಿಸಿದ್ದಾರೆ.

****************

ತೈಲಬೆಲೆ ಏರಿಕೆ, ಸಿಬ್ಬಂದಿ ವೇತನ ಸೇರಿದಂತೆ ಆರ್ಥಿಕ ಸೌಲಭ್ಯ ನಿರ್ವಹಣೆಯಿಂದಾಗಿ ಕಳೆದ ಐದು ವರ್ಷಗಳಲ್ಲಿ ರಾಜ್ಯ ಸಾರಿಗೆ ಸಂಸ್ಥೆಯ ಅಧೀನದಲ್ಲಿರುವ ನಾಲ್ಕು ಸಾರಿಗೆ ನಿಗಮಗಳು ೫ ಸಾವಿರದ ೨೦೦ ಕೋಟಿ ರೂಪಾಯಿ ನಷ್ಟದಲ್ಲಿವೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ.

ವಿಧಾನಪರಿಷತ್‌ನ ಪ್ರಶ್ನೋತ್ತರ ಅವಧಿಯಲ್ಲಿ ಬಿಜೆಪಿ ಸದಸ್ಯ ಕೇಶವಪ್ರಸಾದ್ ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, ನಷ್ಟ ಸರಿದೂಗಿಸಲು ಹಾಗೂ ಸಾರಿಗೆ ನಿಗಮಗಳ ಆರ್ಥಿಕ ಪುನಶ್ಚೇತನಕ್ಕೆ ವಿವಿಧ ಯೋಜನೆಗಳನ್ನು ರೂಪಿಸಲಾಗಿದೆ ಎಂದು ಸಮರ್ಥಿಸಿಕೊಂಡರು.

ಇಂಧನ ಬೆಲೆ ಹೆಚ್ಚಳದೊಂದಿಗೆ ಸಿಬ್ಬಂದಿ ಹಾಗೂ ವಾಹನ ಬಿಡಿಭಾಗಗಳ ಹೆಚ್ಚಳದಿಂದಾಗಿ ಆರ್ಥಿಕ ಹೊರೆ ಉಂಟಾಗಿದ್ದರಿಂದ ಕಳೆದ ಜನವರಿಯಲ್ಲಿ ಬಸ್ ಪ್ರಯಾಣ ದರವನ್ನು ಶೇಕಡಾ ೧೫ರಷ್ಟು ಹೆಚ್ಚಿಸಲಾಗಿದೆ ಎಂದರು.

ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಶಕ್ತಿ ಯೋಜನೆಗೆ ೨೦೨೪-೨೫ನೇ ಸಾಲಿನಲ್ಲಿ ಮೀಸಲಿಟ್ಟಿದ್ದ ೬ಸಾವಿರದ ೬೭೮ ಕೋಟಿ ಅನುದಾನ ಪೈಕಿ ಇನ್ನೂ ೨ ಸಾವಿರ ಕೋಟಿ ಬಿಡುಗಡೆಯಾಗಬೇಕಿದೆ.

ಅನುದಾನ ಮಂಜೂರಾದ ಬಳಿಕ ಸಾರಿಗೆ ನಿಗಮಗಳಿಗೆ ಅನುದಾನ ನೀಡಲಾಗುವುದು ಎಂದು ಮೇಲ್ಮನೆಯಲ್ಲಿ ತಿಳಿಸಿದರು.

****************

ಕಾಶಿಯಾತ್ರೆ, ವೈಷ್ಣೋದೇವಿ ಯಾತ್ರೆ, ಚಾರ್ ಧಾಮ್ ಯಾತ್ರೆಗೆ ರಿಯಾಯಿತಿ ನೀಡಲಾಗುತ್ತಿದ್ದು, ನೇರ ನಗದು ವರ್ಗಾವಣೆ ಮೂಲಕ ಸಬ್ಸಿಡಿಯನ್ನು ಯಾತ್ರಿಕರ ಖಾತೆಗೆ ತಲುಪಿಸುವ ಕೆಲಸ ಮಾಡಲಾಗುತ್ತಿದೆ ಎಂದು ಸಾರಿಗೆ ಹಾಗೂ ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಪರಿಷತ್‌ನಲ್ಲಿ ತಿಳಿಸಿದ್ದಾರೆ.

ಮೇಲ್ಮನೆಯಲ್ಲಿ ಸದಸ್ಯ ಶರವಣ ಕೇಳಿದ ಮತ್ತೊಂದು ಪ್ರಶ್ನೆಗೆ ಉತ್ತರಿಸಿದ ಸಚಿವ ಕೃಷ್ಣ ಬೈರೇಗೌಡ, ಸರ್ಕಾರ ವಶಪಡಿಸಿಕೊಂಡ ಒತ್ತುವರಿಯಾದ ಆಸ್ತಿಯ ಮೌಲ್ಯವನ್ನು ಲೆಕ್ಕ ಹಾಕಲು ಸಮಯ ಬೇಕಾಗಿದ್ದು, ಒಂದು ವಾರ ಸಮಯ ನೀಡಿದರೆ ಉತ್ತರ ನೀಡುವುದಾಗಿ ಸ್ಪಷ್ಟಪಡಿಸಿದ್ದಾರೆ.

ಕಂದಾಯ ಆಸ್ತಿಗಳನ್ನು ಡಿಜಿಟಲೀಕರಣ ಮಾಡುವ ಮೊದಲ ಹಂತದ ಕಾರ್ಯ ಪ್ರಗತಿಯಲ್ಲಿದ್ದು, ಇ-ಜಮಾಬಂಧಿ ಮಾಡಲು ಕ್ರಮಕೈಗೊಂಡಿದ್ದು, ಜಮೀನುಗಳಿಗೆ ಅಧಿಕಾರಿಗಳು ತೆರಳಿ ಲೆಕ್ಕಪರಿಶೋದನೆ ನಡೆಸಲಿದ್ದಾರೆ. ಆ ಕಾರ್ಯ ಪೂರ್ಣಗೊಂಡರೆ ಬೆರಳತುದಿಯಲ್ಲಿ ಎಲ್ಲಾ ಮಾಹಿತಿ ಸಿಗಲಿದೆ. ಡಿಜಿಟಲೀಕರಣವಾದ ಮೇಲೆ ಜಮೀನು ಒತ್ತುವರಿ, ಒತ್ತುವರಿ ತೆರವು ಇತರೆ ಎಲ್ಲಾ ಮಾಹಿತಿಗಳು ಲಭ್ಯವಾಗಲಿದ್ದು, ಈ ಕಾರ್ಯ ಮುಗಿಸಲು ಕನಿಷ್ಟ ಒಂದು ವರ್ಷ ಸಮಯ ಬೇಕಾಗುತ್ತದೆ ಎಂದು ಮಾಹಿತಿ ನೀಡಿದ್ದಾರೆ.

****************

ಕೇಂದ್ರ ಸರ್ಕಾರದ ಪ್ರಜಾಪ್ರಭುತ್ವ ವಿರೋಧಿ ಮತ್ತು ದಕ್ಷಿಣ ರಾಜ್ಯಗಳ ವಿರೋಧಿ ನಿಲುವು ಪ್ರಶ್ನಿಸಿ ಇದೇ ೨೭ ರಂದು ಚೆನ್ನೈನಲ್ಲಿ ದಕ್ಷಿಣ ರಾಜ್ಯಗಳ ಪ್ರತಿನಿಧಿಗಳ ಸಭೆ ನಡೆಯಲಿದೆ. ಈ ಹಿನ್ನೆಲೆಯಲ್ಲಿ ತಮಿಳುನಾಡಿನ ಅರಣ್ಯ ಸಚಿವ ಡಾ.ಕೆ.ಪೊನ್ನುಮುಡಿ ಹಾಗೂ ರಾಜ್ಯಸಭಾ ಸದಸ್ಯ ಮೊಹಮದ್ ಅಬ್ದುಲ್ಲಾ ಇಸ್ಮಾಯಿಲ್ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಕಾವೇರಿ ನಿವಾಸದಲ್ಲಿಂದು ಭೇಟಿಯಾಗಿ, ಸಭೆಯಲ್ಲಿ ಪಾಲ್ಗೊಳ್ಳುವಂತೆ ಆಹ್ವಾನ ನೀಡಿದರು. ಇದಕ್ಕೂ ಮೊದಲು ತಮಿಳುನಾಡು ಮುಖ್ಯಮಂತ್ರಿ ಸ್ಟಾಲಿನ್ ದೂರವಾಣಿ ಮೂಲಕ ಮುಖ್ಯಮಂತ್ರಿಗಳ ಜೊತೆ ಇದೇ ವಿಚಾರಗಳ ಬಗ್ಗೆ ಚರ್ಚಿಸಿದರು. ಕರ್ನಾಟಕದ ಹಿತಾಸಕ್ತಿಗೆ ವಿರುದ್ಧವಾದ, ಪ್ರಜಾಪ್ರಭುತ್ವವನ್ನು ದುರ್ಬಲಗೊಳಿಸುವ, ಸಂವಿಧಾನದ ಒಕ್ಕೂಟ ತತ್ವಕ್ಕೆ ವಿರುದ್ಧವಾದ ಕೇಂದ್ರ ಸರ್ಕಾರದ ಎಲ್ಲಾ ನಡೆಗಳನ್ನು ವಿರೋಧಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಬಳಿಕ ತಮಿಳುನಾಡು ಅರಣ್ಯ ಸಚಿವರ ನಿಯೋಗ ವಿಧಾನಸೌಧದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿ ಮಾಡಿ, ಆಹ್ವಾನ ನೀಡಿದರು.

****************

ಶಿರಸಿಯ ಕಾಳುಮೆಣಸಿನ ಬೆಲೆಯನ್ನು ಸಂಬಾರ ಮಂಡಳಿಯ ದರಪಟ್ಟಿಯಲ್ಲಿ ನಮೂದಿಸುವಂತೆ ಕೇಂದ್ರ ವಾಣಿಜ್ಯ ಸಚಿವ ಪಿಯುಷ್ ಗೋಯಲ್ ಅವರಲ್ಲಿ ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಮನವಿ ಮಾಡಿದ್ದಾರೆ.

ದೆಹಲಿಯಲ್ಲಿ ವಾಣಿಜ್ಯ ಸಚಿವರನ್ನು ಭೇಟಿ ಮಾಡಿದ ಕಾಗೇರಿ, ಸಂಬಾರ ಮಂಡಳಿ ದರ ಪಟ್ಟಿಯಲ್ಲಿ ಕೇವಲ ಕೊಚ್ಚಿಯ ಕಪ್ಪುಮೆಣಸು ಎಂದು ಮಾತ್ರ ನಮೂದಿಸಲಾಗುತ್ತಿದೆ ಎಂದು ತಿಳಿಸಿದರು.

ಉತ್ತರ ಕನ್ನಡ ಜಿಲ್ಲೆ ದೇಶದಲ್ಲೇ ಕಾಳುಮೆಣಸು ಉತ್ಪಾದನೆಯಲ್ಲಿ ಮುಂಚೂಣಿಯಲ್ಲಿದೆ. ಈ ಬೆಳೆಯ ಮಾರುಕಟ್ಟೆ ಕೇಂದ್ರ ಸ್ಥಳವಾದ ಶಿರಸಿ ಕಾಳುಮೆಣಸು ಬೆಲೆಯನ್ನು ಕೂಡ ಪ್ರತ್ಯೇಕವಾಗಿ ಸಂಬಾರ ಮಂಡಳಿಯ ಅಧಿಕೃತ ದರಪಟ್ಟಿಯಲ್ಲಿ ನಿತ್ಯ ದಾಖಲಿಸಬೇಕು ಎಂದು ಮನವಿ ಮಾಡಿದ್ದಾರೆ.

ಈ ಕುರಿತು ಸಕಾರಾತ್ಮಕವಾಗಿ ಸ್ಪಂದಿಸಿದ ಕೇಂದ್ರ ಸಚಿವರು ರೈತರಿಗೆ ಗುಣಮಟ್ಟದ ಬೆಳೆಗೆ ಯೋಗ್ಯ ದರ ಸಿಗುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿರುವುದಾಗಿ ಸಂಸದರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

****************

ನಟಿ ರನ್ಯಾ ರಾವ್ ಚಿನ್ನ ಕಳ್ಳ ಸಾಗಣೆ ಪ್ರಕರಣದಲ್ಲಿ ಸಚಿವರು ಭಾಗಿಯಾಗಿರುವ ಆರೋಪ ಕೇಳಿ ಬಂದಿದ್ದು, ಅವರ ಹೆಸರು ಬಹಿರಂಗ ಪಡಿಸುವಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಗ್ರಹಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಟಿ ದುಬೈನಿಂದ ಬೆಂಗಳೂರಿಗೆ ಸುಮಾರು ೪೦ ಬಾರಿ ಪ್ರವಾಸ ಕೈಗೊಂಡಿದ್ದು, ಚಿನ್ನ ಕಳ್ಳ ಸಾಗಣೆಯ ಪ್ರಮಾಣದ ಆಗಾಧತೆ ಎಷ್ಟಿರಬಹುದು ಎಂದು ಪ್ರಶ್ನಿಸಿದ್ದಾರೆ. ಬೆಂಗಳೂರಿನ ವಿಮಾನ ನಿಲ್ದಾಣದಲ್ಲಿ ಅಧಿಕಾರಿಗಳು ನಟಿಗೆ ನೀಡಿದ್ದ ಶಿಷ್ಟಾಚಾರದ ಬಗ್ಗೆಯೂ ವಿಜಯೇಂದ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಈ ಪ್ರಕರಣದಲ್ಲಿ ಹವಾಲಾ ಹಣ ಬಳಕೆಯಾಗಿರುವ ಶಂಕೆ ಇದ್ದು, ಈ ಪ್ರಕರಣವನ್ನು ವಿಧಾನಸಭೆಯಲ್ಲಿ ಚರ್ಚಿಸುವುದಾಗಿ ತಿಳಿಸಿದ್ದಾರೆ.

****************

ಲೋಕಾಯುಕ್ತ ಕಚೇರಿಯಿಂದ ರಾಮನಗರ ಜಿಲ್ಲೆಯಲ್ಲಿ ಕೈಗೊಂಡ ಸಾರ್ವಜನಿಕರ ಕುಂದುಕೊರತೆಗಳ ಹಾಗೂ ದೂರುಗಳ ವಿಚಾರಣೆ ಅತ್ಯಂತ ಯಶಸ್ವಿಯಾಗಿದ್ದು, ಸ್ಥಳದಲ್ಲಿಯೇ ೮೧ ಪ್ರಕರಣಗಳು ತೀರ್ಮಾನವಾಗಿವೆ ಎಂದು ಉಪ ಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣಿಂದ್ರ ತಿಳಿಸಿದ್ದಾರೆ. ರಾಮನಗರ ಜಿಲ್ಲೆಯಲ್ಲಿ ಎರಡು ದಿನಗಳ ಕಾಲ ಸಾರ್ವಜನಿಕರ ಕುಂದುಕೊರತೆಗಳ ದೂರುಗಳ ವಿಚಾರಣೆ ಹಾಗೂ ಪ್ರಕರಣ ವಿಲೇವಾರಿ ಕುರಿತಂತೆ ೧೭೦ ಪ್ರಕರಣಗಳನ್ನು ಆಯ್ಕೆ ಮಾಡಿಕೊಳ್ಳಲಾಗಿತ್ತು, ಅವುಗಳಲ್ಲಿ ಶೇ.೭೦ರಷ್ಟು ಪ್ರಕರಣಗಳು ವಿಲೇವಾರಿಯಾಗಿವೆ. ಸ್ಥಳದಲ್ಲಿಯೇ ೮೧ ಪ್ರಕರಣಗಳು ತೀರ್ಮಾನ ಆಗಿದ್ದು, ಕಾರ್ಯಕ್ರಮದ ಯಶಸ್ವಿಗೆ ಜಿಲ್ಲಾಡಳಿತ ಉತ್ತಮ ಸಹಕಾರ ನೀಡಿದೆ ಎಂದು ಹೇಳಿದ್ದಾರೆ. ಇದೇ ವೇಳೆ, ವಿಚಾರಣೆ ಸಂದರ್ಭದಲ್ಲಿ ಪ್ರಕರಣದ ವಿಚಾರಣೆಗೆ ಗೈರು ಹಾಜರಾಗಿದ್ದ ಅಹವಾಲು ಸಲ್ಲಿಸಿದವರನ್ನು ಮೊಬೈಲ್ ನಲ್ಲಿಯೇ ಸಂಪರ್ಕಿಸಿ ವಿಚಾರಣೆ ನಡೆಸಿ, ತೀರ್ಪು ಪ್ರಕಟಿಸಿದರು.

****************

ಮಂಗಳೂರು ಹೊರವಲಯದ ಡಾ.ಶಿವರಾಮ ಕಾರಂತ ಪಿಲಿಕುಳ ನಿಸರ್ಗಧಾಮಕ್ಕೆ ಹೊಸ ಅತಿಥಿಗಳ ಆಗಮನವಾಗಿದೆ. ರಾಣಿ ಹೆಸರಿನ ಹುಲಿ ಎರಡು ಪುಟ್ಟ ಮರಿಗಳಿಗೆ ಜನ್ಮ ನೀಡಿದೆ. ರಾಣಿ ಹುಲಿ ಒಂದು ಗಂಡು ಮತ್ತು ಒಂದು ಹೆಣ್ಣು ಮರಿಗೆ ಜನ್ಮ ನೀಡಿದ್ದು, ಮರಿಗಳು ಆರೋಗ್ಯಯುತವಾಗಿವೆ ಎಂದು ಪಿಲಿಕುಳ ಜೈವಿಕ ಉದ್ಯಾನವನದ ನಿರ್ದೇಶಕ ಜಯಪ್ರಕಾಶ್ ಭಂಡಾರಿ ತಿಳಿಸಿದ್ದಾರೆ. ರಾಣಿ ಹುಲಿ ೨೦೧೮ ರಲ್ಲಿ ಐದು ಮರಿಗಳಿಗೆ ಜನ್ಮ ನೀಡುವ ಮೂಲಕ ದಾಖಲೆ ನಿರ್ಮಿಸಿತ್ತು. ೨೦೨೧ ರಲ್ಲಿ ಮತ್ತೆ ಮೂರು ಮರಿಗಳಿಗೆ ಜನ್ಮ ನೀಡಿತ್ತು. ಪ್ರಾಣಿ ವಿನಿಮಯ ಕಾರ್ಯಕ್ರಮದ ಭಾಗವಾಗಿ ೨೦೧೮ ರಲ್ಲಿ ಬನ್ನೇರುಘಟ್ಟ ಜೈವಿಕ ಉದ್ಯಾನವನದಿಂದ ರಾಣಿಯನ್ನು ಪಿಲಿಕುಳಕ್ಕೆ ತರಲಾಗಿತ್ತು.

****************

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ತಾಪಮಾನ ತೀವ್ರವಾಗುತ್ತಿದ್ದು, ಸಾರ್ವಜನಿಕರು ಆರೋಗ್ಯದ ಕುರಿತಂತೆ ಮುಂಜಾಗ್ರತೆ ವಹಿಸಬೇಕು ಎಂದು ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ಸೂಚಿಸಿದ್ದಾರೆ. ಭಾರತಿಯ ಹವಾಮಾನ ಇಲಾಖೆ ಹಾಗೂ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ವರದಿಯಂತೆ ಕರಾವಳಿ ಜಿಲ್ಲೆಗಳಲ್ಲಿ ಅಧಿಕ ಉಷ್ಣಾಂಶ ದಾಖಲಾಗುತ್ತಿದ್ದು, ಬಿಸಿಗಾಳಿಯ ಮುನ್ಸೂಚನೆ ನೀಡಲಾಗಿದೆ.

********ಮುಕ್ತಾಯ********